ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬೃ ಬಿಂ.ಮ.ಪಾ/ಕಾ ಪಾ.ಅ(ವಿ)/ದಾ.ವ/ಆ.ಅ/ /10/21-22

ಕಾರ್ಯಪಾಲಕ ಅಭಿಯಂತರು (ವಿದ್ಯುತ್)ರವರ ಕಛೇರಿ
ಬೃ.ಬಿಂ.ಮ.ಪಾ, ದಾಸರಹಳ್ಳಿ ವಲಯ
ಎಂ.ಇ.ವಿ ಲೇ ಔಟ್ ಬೆಂಗಳೂರು-73.
ದಿನಾಂಕ: 24/3/2022

ಆಡಳಿತಾತ್ಮಕ ಅನುಮೋದನೆ

ವಿಷಯ:- Annual Maintanance of street lights package D-1 in Kammagondanhalli Surrounding Area ward No 12

****

ಅಂದಾಜು ಮೊತ್ತ (ಲಕ್ಷಗಳಲ್ಲಿ) ರೂ:29.50ಲಕ್ಷಗಳು

ಉಲ್ಲೇಖ: 1. ಮಾನ್ಯ ಮುಖ್ಯ ಆಯುಕ್ತರು ಅಧಿಕಾರ ಪ್ರತ್ಯಾಯೋಜಿಸಿ ಹೊರಡಿಸಿರುವ ಕಛೇರಿ ಆದೇಶ ಸಂಖ್ಯೆ:ಬಿ12(1)/ಪಿಆರ್/394/2021-22 ದಿನಾಂಕ 27.07.2021.

2. ಅಧೀಕ್ಷಕ ಅಭಿಯಂತರರ (ವಿದ್ಯುತ್)ರವರ ಅನುಮೋದನೆ ಕ್ರಮ ಸಂಖ್ಯೆ:63 ದಿನಾಂಕ:19.03.2022

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯುತ್) ದಾಸರಹಳ್ಳಿ ವಲಯರವರು ಈ ಕೆಳಗಿನ ಕಾಮಗಾರಿಗೆ 2021-22 ನೇ ಸಾಲಿನ ಅಯವ್ಯಯ ಪಟ್ಟಿಯ ಕೋಡ್ ಸಂಖ್ಯೆ 05-220902 ರಲ್ಲಿ ಲೆಕ್ಕ ಶೀರ್ಷಿಕೆ ಪಿ-0300 ಅಡಿಯಲ್ಲಿ ಬರುವ ಕೆ.ಪಿ.ಡಬ್ಲ್ಯೂಡಿ. 2019-20 ವಿದ್ಯುತ್ (ಎಸ್.ಆರ್) ದರಗಳ ಹಾಗೂ ಅನುಮೋದಿತ ದರಗಳ ಅನ್ವಯ ಅಂದಾಜು ಪಟ್ಟಿಯನ್ನು ತಯಾರಿಸಿ ಮಂಜೂರಾತಿಗಾಗಿ ಮಂಡಿಸಿರುತ್ತಾರೆ.

ಸದರಿ ಕಾಮಗಾರಿ ಕೆಲಸಕ್ಕೆ ಮಾನ್ಯ ಮುಖ್ಯ ಆಯುಕ್ತರು ಅಧಿಕಾರ ಪ್ರತ್ಯಾಯೋಜಿಸಿ ಹೊರಡಿಸಿರುವ ಆದೇಶ ಸಂಖ್ಯೆ: ಬಿ12(1)/ಪಿ.ಆರ್/394/2021-22,ದಿನಾಂಕ:27.07.2021 ರಂತೆ ನೀಡಿರುವ ಅಧಿಕಾರದನ್ವಯ ಮೇಲಿನ ಕಾಮಗಾರಿಗೆ ಆಡಳಿತಾತ್ಮಕ ಮಂಜೂರಾತಿಯನ್ನು ನೀಡಿದೆ.

ಆಡಳಿತಾತ್ಮಕ ಮಂಜೂರಾತಿ ಪುಸ್ತಕದ ಪುಟ ಸಂಖ್ಯೆ:36 ಕ್ರಮಸಂಖ್ಯೆ: 10 ರಲ್ಲಿ ನಮೂದಿಸಲಾಗಿದೆ.

ಈ ಮೇಲ್ಕಂಡ ಅಂದಾಜುಪಟ್ಟಿಗೆ ಕೆಳಗೆ ನಮೂದಿಸಿರುವ ಷರತ್ತುಗಳನ್ನು ಪಾಲಿಸುವ ನಿಬಂಧನೆಯೊಂದಿಗೆ ಆಡಳಿತಾತ್ಮಕ ಮಂಜೂರಾತಿ ನೀಡಿದೆ.

ಷರತ್ತುಗಳು:

1. ದರಪಟ್ಟಿ ಆಧಾರಿತವಲ್ಲದ ಅಂಶಗಳಿಗೆ ಡೆಟಾ ದರವನ್ನು ತಯಾರಿಸಿ ಅನುಮೋದನೆ ಪಡೆಯುವುದು.
2. ಅಂದಾಜು ಪಟ್ಟಿಯಲ್ಲಿ ಮಾರುಕಟ್ಟೆ ದರ ಅಳವಡಿಸಿಕೊಂಡಿರುವ ಅಂಶಗಳಿಗೆ ಕೊಟೇಷನ್ ಕರೆದು ಅನುಮೋದನೆ ಪಡೆಯುವುದು.
3. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.

ಕಾರ್ಯಪಾಲಕ ಅಭಿಯಂತರರು (ವಿದ್ಯುತ್) 24/03/22
ದಾಸರಹಳ್ಳಿ ವಲಯ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು:

1. ಮುಖ್ಯ ಅಭಿಯಂತರರು ದಾಸರಹಳ್ಳಿ ವಲಯ ರವರ ಮಾಹಿತಿಗಾಗಿ,
2. ಅಧೀಕ್ಷಕ ಅಭಿಯಂತರರು ವಿದ್ಯುತ್ ಬಿಬಿಎಂಪಿ.
3. ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯುತ್ ವಿಭಾಗ) ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
4. ಕಛೇರಿ ಪ್ರತಿ

Scanned by CamScanner